## ಕರ್ನಾಟಕ ಸರ್ಕಾರ

ಸಂಖ್ಯೆ:HFW 76 ACS 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:12.03.2021

### ಸುತ್ತೋಲೆ

ವಿಷಯ: ಕೋವಿಡ್ ಪ್ರಕರಣಗಳ ನಿಯಂತ್ರಣಕ್ಕಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು.
ಉಲ್ಲೇಖ: ರಾಜ್ಯ ಮಟ್ಟದ ಕೋವಿಡ್ 19 ತಾಂತ್ರಿಕ ಸಲಹಾ ಸಮಿತಿಯ 83ನೇ ಸಭಾ ನಡಾವಳಿಗಳು, ದಿನಾಂಕ: 11.03.2021.

ಬೆಂಗಳೂರು ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಗುಂಪು ಗುಂಪಾಗಿ ಕೋವಿಡ್ 19 ಪ್ರಕರಣಗಳು ವರದಿಯಾಗುತ್ತಿದ್ದು, ಎರಡನೇ ಅಲೆಯ ಅಪಾಯವನ್ನು ನಿಯಂತ್ರಿಸುವ ನಿಟ್ಟಿನಲ್ಲಿ . ಉಲ್ಲೇಖದ ಅನ್ವಯ ಈ ಕೆಳಗಿನ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ.

1. ಅಂತರ ರಾಜ್ಯ ಪ್ರಯಾಣ, ಟೆಸ್ಟ್ ಪಾಸಿಟಿವಿಟಿ ಪ್ರಮಾಣ ಹಾಗೂ ಸೋಂಕು ಹರಡುವ ಅಪಾಯವನ್ನು ತಗ್ಗಿಸುವ ನಿಟ್ಟಿನಲ್ಲಿ ಈ ಜಿಲ್ಲೆಗಳಲ್ಲಿ ದೈನಂದಿನ ಪರೀಕ್ಷಾ ಪ್ರಮಾಣವನ್ನು ಪರಿಷ್ಕೃರಿಸಲಾಗಿದೆ. ಬೆಳಗಾವಿ – 3,000 , ಬೆಂಗಳೂರು ನಗರ ಹಾಗೂ ಬಿ ಬಿ ಎಂ ಪಿ ವ್ಯಾಪ್ತಿ – 40,000, ದಕ್ಷಿಣ ಕನ್ನದ – 3,000, ಮೈಸೂರು – 5,000, ಕೊಡಗು – 1,000, ಉಡುಪಿ – 2,000, ತುಮಕೂರು – 3,500 ಹಾಗೂ ವಿಜಯಪುರ – 2,000 ಪರೀಕ್ಷೆಗಳು, ಉಳಿದ ಜಿಲ್ಲೆಗಳಲ್ಲಿ ಈಗಾಗಲೇ ನೀಡಿರುವ ಗುರಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.
2. ಬಳ್ಳಾರಿ, ಮೈಸೂರು,ದಾವಣಗೆರೆ,ಚಿಕ್ಕಮಗಳೂರು, ಬಾಗಲಕೋಟೆ, ಬೆಳಗಾವಿ, ವಿಜಯಪುರ,ದಕ್ಷಿಣ ಕನ್ನಡ, ತುಮಕೂರು, ಬೀದರ್, ಉಡುಪಿ, ಕಲಬುರಗಿ, ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಕೋವಿಡ್ 19 ದೈನಂದಿನ ಪರೀಕ್ಷಾ ಗುರಿಯನ್ನು ತಲುಪಲು ಪೂರ್ಣ ಪ್ರಮಾಣದಲ್ಲಿ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.
3. ನಿಗದಿತ ಗುರಿಯಂತೆ, ದಾವಣಗೆರೆ, ಬಳ್ಳಾರಿ, ಮೈಸೂರು, ಬೆಳಗಾವಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆ ಗಳಲ್ಲಿ ಆರ್ ಟಿ – ಪಿಸಿಆರ್ ಪರೀಕ್ಷಾ ಪ್ರಮಾಣವನ್ನು ಹೆಚ್ಚಿಸುವುದು.
4. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆರ್ ಟಿ – ಪಿಸಿಆರ್ ಪರೀಕ್ಷೆಗಳನ್ನು ಗಣನೀಯವಾಗಿ ಹೆಚ್ಚಿಸುವುದು ಹಾಗೂ ರ್‍ಯಾಪಿಡ್ ಆಂಟಿಜೆನ್ ಪರೀಕ್ಷೆಗಳನ್ನು ಕಡಿಮೆಗೊಳಿಸುವುದು.
5. ಸೋಂಕಿತರ ಸಂಪರ್ಕಿತರನ್ನು ಪತ್ತೆ ಹಚ್ಚುವ ಕಾರ್ಯವನ್ನು ದಕ್ಷಿಣ ಕನ್ನಡ, ಬೀದರ್, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕಲಬುರಗಿ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಚುರುಕುಗೊಳಿಸಬೇಕು. ಸಂಪರ್ಕಿತರನ್ನು ಪತ್ತೆ ಹಚ್ಚುವ ಪ್ರಕ್ರಿಯೆಯು 1:20 ಪ್ರಮಾಣದಲ್ಲಿರಬೇಕು.

6. ಕೋವಿಡ್ ನಿಯಂತ್ರಣಕ್ಕೆ ಅಗತ್ಯ ಕ್ರಮಗಳಾದ ಮಾಸ್ಕ್ ಧರಿಸುವುದು, ದೈಹಿಕ ಅಂತರ ಪಾಲನೆಯನ್ನು ಕಡ್ಡಾಗೊಳಸಲಾಗಿದ್ದು, ಇದನ್ನು ಜಾರಿಗೊಳಸಲು ಸೂಚಿಸಲಾಗಿದೆ.
7. ಕೋವಿಡ್ ಲಸಿಕೆ ಪಡೆದುಕೊಳ್ಳುವುದು ಹಾಗೂ ಕೋವಿಡ್ ಪರೀಕ್ಷೆಗೆ ಒಳಪಡುವುದು, ಇತ್ಯಾದಿಗಳ ಕುರಿತು ವ್ಯಾಪಕವಾಗಿ ಆರೋಗ್ಯ ಶಿಕ್ಷಣವನ್ನು ವಿವಿಧ ಮಾಧ್ಯಮಗಳ ಮೂಲಕ (ಮುದ್ರಣ, ವಿದ್ಯುನ್ಮಾನ, ಸೋಷಿಯಲ್ ಮೀಡಿಯಾ ಇತ್ಯಾದಿ) ಕೈಗೊಳ್ಳುವುದು. ಸದರಿ ಚಟುವಟಿಕೆಯನ್ನು ಪರಿಣಾಮಕಾರಿಯಾಗಿಸಲು ಸನ್ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಆರೋಗ್ಯ ಮತ್ತು ಕು ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಮಂತ್ರಿಗಳ ಮೂಲಕ ಸಾರ್ವಜನಿಕರಿಗೆ ಸಂದೇಶವನ್ನು ನೀಡಲು ಅಗತ್ಯ ಕ್ರಮ ಕೈಗೊಳ್ಳುವುದು (ಸಹ ನಿರ್ದೇಶಕರು, ಆರೋಗ್ಯ ಶಿಕ್ಷಣ ವಿಭಾಗ).
8. ಕೋವಿಡ್ ನಿಯಂತ್ರಣ ಕ್ರಮಗಳನ್ನು ಪಾಲನೆ, ಕೋವಿಡ್ ಪರೀಕ್ಷೆಗೆ ಒಳಪಡುವುದು ಹಾಗೂ ಕೋವಿಡ್ ಲಸಿಕೆ ಪಡೆಯುವಂತೆ, ಆಯಾ ಜಿಲ್ಲಾಧಿಕಾರಿಗಳೂ ಸಹ ಅಗತ್ಯ ಸಂದೇಶಗಳನ್ನು ಸಾರ್ವಜನಿಕರಿಗೆ ನೀಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
9. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯೂ ಸೇರಿದಂತೆ, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕೋವಿಡ್ 19 ಲಸಿಕೆ ನೀಡುವ ಕಾರ್ಯಕ್ರಮದಲ್ಲಿ ನಿಗದಿತ ಗುರಿಯನ್ನು ಸಾಧಿಸಲು ಸೂಚಿಸಿದೆ.
10. ವಿವಿಧ ಸಮಾರಂಭಗಳು ಹಾಗೂ ಆಚರಣೆಗಳ ಸಂದರ್ಭದಲ್ಲಿ ಹೆಚ್ಚು ಸಾರ್ವಜನಿಕರು ಗುಂಪು ಸೇರುವ ಹಿನ್ನೆಲೆಯಲ್ಲಿ ಸೋಂಕು ಹರಡುವ ಅಪಾಯವು ಹೆಚ್ಚಿರುತ್ತದೆ. ಆದ್ದರಿಂದ ವಿವಿಧ ಸಂದರ್ಭಗಳಲ್ಲಿ ಈ ಕೆಳಗೆ ಸೂಚಿಸಿದ ಸಂಖ್ಯೆಯನ್ನು ಮೀರದಂತೆ ಮಾತ್ರವೇ ಸಾರ್ವಜನಿಕರಿಗೆ ಅವಕಾಶ ನೀಡಲು ಸೂಚಿಸಿದೆ.

| ಸಮಾರಂಭಗಳು / ಆಚರಣೆಗಳು | **ಅವಕಾಶ ನೀಡಬಹುದಾದ ಸಾರ್ವಜನಿಕರ ಸಂಖ್ಯೆ** | **ಷರಾ** |
|---|---|---|
| 1. ಸಾಮಾಜಿಕ ಆಚರಣೆಗಳು / ಸಮಾರಂಭಗಳು | | ಭಾರತ ಸರ್ಕಾರದ ಮಾರ್ಗಸೂಚಿಯಂತೆ 3.25 sq.meter per person ಮಾನದಂಡವನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ. |
| • ಮದುವೆ | 500 ಮೀರದಂತೆ | ತೆರೆದ ಪ್ರದೇಶಗಳು |
| | 200 ಮೀರದಂತೆ | ಸಭಾಂಗಣಗಳು / ಹಾಲ್‌ಗಳು , ಇತ್ಯಾದಿ ಮುಚ್ಚಿದ ಪ್ರದೇಶಗಳು |
| • ಜನ್ಮದಿನ ಹಾಗೂ ಇತರ ಆಚರಣೆಗಳು | 100 ಮೀರದಂತೆ<br>50 ಮೀರದಂತೆ | ತೆರೆದ ಪ್ರದೇಶಗಳು<br>ಸಭಾಂಗಣಗಳು / ಹಾಲ್‌ಗಳು , ಇತ್ಯಾದಿ ಮುಚ್ಚಿದ ಪ್ರದೇಶಗಳು |
| • ನಿಧನ / ಶವಸಂಸ್ಕಾರ | 100 ಮೀರದಂತೆ<br>50 ಮೀರದಂತೆ | ತೆರೆದ ಪ್ರದೇಶಗಳು<br>ಸಭಾಂಗಣಗಳು / ಹಾಲ್‌ಗಳು , ಇತ್ಯಾದಿ ಮುಚ್ಚಿದ ಪ್ರದೇಶಗಳು |
| • ಅಂತ್ಯ ಕ್ರಿಯೆ (Cremation/burial) | 50 ಮೀರದಂತೆ | |
| • ಇತರೆ ಸಮಾರಂಭಗಳು | 100 ಮೀರದಂತೆ | ಹಾಲ್‌ನ ವಿಸ್ತೀರ್ಣಕ್ಕೆ ಅನುಗುಣವಾಗಿ |
| 2. ಧಾರ್ಮಿಕ ಆಚರಣೆಗಳು / ಸಮಾರಂಭಗಳು | 500 ಮೀರದಂತೆ | ತೆರೆದ ಪ್ರದೇಶಗಳು |
| 3. ರಾಜಕೀಯ ಆಚರಣೆಗಳು / ಸಮಾರಂಭಗಳು | 500 ಮೀರದಂತೆ | ತೆರೆದ ಪ್ರದೇಶಗಳು |

...3